Akashvani : Bengaluru
National Bulletin In Kannada
28.10.2025 : 7.35am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

**<><*<><>*><>**

<u>ಮುಖ್ಯಾಂಶಗಳು</u>

೧. ನವದೆಹಲಿಯಲ್ಲಿಂದು ೮ನೇ ಅಂತಾರಾಷ್ಟ್ರೀಯ ಸೌರ ಒಕ್ಕೂಟ - ಐಎಸ್‌ಎ ಸಭೆ; ರಾಷ್ಟ್ರಪತಿ ದ್ರೌಪದಿ ಮುರ್ಮು ಮುಖ್ಯ ಭಾಷಣ

೨. ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಎರಡನೇ ಹಂತದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ - ಮುಂಬರುವ ಫೆಬ್ರವರಿ ೭ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟ

೩. ಪ್ರಸಕ್ತ ಮುಂಗಾರು ಋತುವಿನಲ್ಲಿ ೧೫ ಸಾವಿರ ಕೋಟಿ ರೂಪಾಯಿಗಳ ಬೇಳೆಕಾಳು ಖರೀದಿ ಯೋಜನೆಗೆ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಮೋದನೆ

೪. ಬಲಗೊಳ್ಳುತ್ತಿರುವ ಮೊಂಥಾ ಚಂಡಮಾರುತ; ಹಲವು ರಾಜ್ಯಗಳಿಗೆ ರೆಡ್ ಅಲರ್ಟ್ ಘೋಷಣೆ

**************

ನವದೆಹಲಿಯ ಭಾರತ್ ಮಂಟಪದಲ್ಲಿಂದು ೮ನೇ ಅಂತಾರಾಷ್ಟ್ರೀಯ ಸೌರ ಒಕ್ಕೂಟ - ಐಎಸ್‌ಎ ಸಭೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮುಖ್ಯ ಭಾಷಣ ಮಾಡಲಿದ್ದಾರೆ. ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಅವರು ಇಂದು ಐಎಸ್‌ಎ ಉದ್ಘಾಟನಾ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಾಲ್ಕು ದಿನಗಳ ಈ ಜಾಗತಿಕ ಕಾರ್ಯಕ್ರಮದಲ್ಲಿ ೧೨೪ ರಾಷ್ಟ್ರಗಳು ಮತ್ತು ಜಗತ್ತಿನಾದ್ಯಂತದ ೪೦ಕ್ಕೂ ಹೆಚ್ಚು ಸಚಿವರು ಭಾಗವಹಿಸುತ್ತಿದ್ದಾರೆ. ಈ ಕಾರ್ಯಕ್ರಮ ಸಹಕಾರವನ್ನು ಬಲಪಡಿಸಲು ಹಾಗೂ ಉಜ್ವಲ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ಸೌರಶಕ್ತಿ ಅಳವಡಿಕೆಯನ್ನು ವೇಗಗೊಳಿಸಲು ಜಾಗತಿಕ ಸಮುದಾಯವನ್ನು ಒಟ್ಟುಗೂಡಿಸಿದೆ. ಅಧಿವೇಶನಗಳು, ಸದಸ್ಯ ರಾಷ್ಟ್ರಗಳು, ಪ್ರಗತಿ ಪರಿಶೀಲನೆ ನಡೆಸಿ,

ಎದುರಾಗಿರುವ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳಲು ಮತ್ತು ಎಲ್ಲರಿಗೂ ಕೈಗೆಟುಕುವ ಸೌರಶಕ್ತಿ ಎಂಬ ಒಂದೇ ದೃಷ್ಟಿಕೋನದತ್ತ ಕ್ರಮವಹಿಸಲು ವೇದಿಕೆ ಒದಗಿಸಿದೆ.

**************

೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಎರಡನೇ ಹಂತದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ - ಎಸ್‌ಐಆರ್ ನಡೆಯಲಿದ್ದು, ಮುಂದಿನ ವರ್ಷದ ಫೆಬ್ರವರಿ ೭ ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಈ ಹಂತದಲ್ಲಿ ಉತ್ತರ ಪ್ರದೇಶ, ಗುಜರಾತ್, ಮಧ್ಯಪ್ರದೇಶ, ಛತ್ತೀಸ್‌ಗಢ, ರಾಜಸ್ಥಾನ, ತಮಿಳುನಾಡು, ಪಶ್ಚಿಮ ಬಂಗಾಳ, ಗೋವಾ, ಕೇರಳ, ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಲಕ್ಷದ್ವೀಪಗಳಲ್ಲಿ ಎಸ್‌ಐಆರ್ ಕಾರ್ಯಾಚರಣೆ ನಡೆಯಲಿದೆ. ಈ ಹಂತ ೫೧ ಕೋಟಿ ಮತದಾರರನ್ನು ಒಳಗೊಳ್ಳುತ್ತದೆ ಎಂದು ತಿಳಿಸಿದರು. ಗಣತಿ ನಮೂನೆಗಳ ಮುದ್ರಣ ಮತ್ತು ಬೂತ್ ಮಟ್ಟದ ಅಧಿಕಾರಿಗಳ ತರಬೇತಿ ಇಂದಿನಿಂದ ಪ್ರಾರಂಭವಾಗಿ ನವೆಂಬರ್ ೩ ರವರೆಗೆ ಮುಂದುವರಿಯುತ್ತದೆ. ಗಣತಿ ಹಂತ ಡಿಸೆಂಬರ್ ೪ ರವರೆಗೆ ನಡೆಯಲಿದೆ. ಕರಡು ಮತದಾರರ ಪಟ್ಟಿಯನ್ನು ಡಿಸೆಂಬರ್ ೯ ರಂದು ಪ್ರಕಟಿಸಲಾಗುವುದು, ನಂತರ ೨೦೨೬ ರ ಜನವರಿ ೮ ರವರೆಗೆ ಮನವಿ ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ. ವಿಚಾರಣೆ ಮತ್ತು ಪರಿಶೀಲನೆ ಡಿಸೆಂಬರ್ ೯ ರಿಂದ ೨೦೨೬ ರ ಜನವರಿ ೩೧ ರವರೆಗೆ ನಡೆಯಲಿದೆ.

**************

ಪ್ರಸಕ್ತ ಮುಂಗಾರು ಋತುವಿನಲ್ಲಿ ತೆಲಂಗಾಣ, ಒಡಿಶಾ, ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶದಲ್ಲಿ ೧೫ ಸಾವಿರ ಕೋಟಿ ರೂಪಾಯಿಗಳ ಖರೀದಿ ಯೋಜನೆಗೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಮೋದನೆ ನೀಡಿದ್ದಾರೆ. ಪ್ರಧಾನ ಮಂತ್ರಿ ಅನ್ನದಾತ ಆಯ್ ಸಂರಕ್ಷಣಾ ಅಭಿಯಾನ ಮತ್ತು ಸಚಿವಾಲಯದ ಇತರ ಯೋಜನೆಗಳ ಅಡಿಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ಅನುಮೋದನೆಗಳನ್ನು ನೀಡಲಾಗಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ. ರೈತರು ತಮ್ಮ ಉತ್ಪನ್ನಗಳಿಗೆ ಉತ್ತಮ ಲಾಭವನ್ನು

ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಮಾರುಕಟ್ಟೆಯ ಏರಿಳಿತಗಳಿಂದ ಅವರನ್ನು ರಕ್ಷಿಸುವ ಮೂಲಕ ಅವರ ಆದಾಯವನ್ನು ರಕ್ಷಿಸಲು ಈ ಅನುಮೋದನೆಗಳನ್ನು ನೀಡಲಾಗಿದೆ ಎಂದು ಕೃಷಿ ಸಚಿವರು ತಿಳಿಸಿದ್ದಾರೆ.

**************

ಪ್ರಧಾನಿ ನರೇಂದ್ರ ಮೋದಿ ಮುಂಬೈನಲ್ಲಿ ನಾಳೆ ನಡೆಯುವ ಕಡಲ ನಾಯಕರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ, ಅವರು ಭಾರತ ಕಡಲ ಸಪ್ತಾಹ ೨೦೨೫ರ ಭಾಗವಾಗಿ ಜಾಗತಿಕ ಕಡಲ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ವೇದಿಕೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಧಾನ ಮಂತ್ರಿಯವರ ಭಾಗವಹಿಸುವಿಕೆಯು ಕಡಲ ಅಮೃತ ಕಾಲ ದೃಷ್ಟಿಕೋನ ೨೦೪೭ ರೊಂದಿಗೆ ಹೊಂದಿಕೆಯಾಗುತ್ತಿದ್ದು, ಮಹತ್ವಾಕಾಂಕ್ಷೆಯ, ಭವಿಷ್ಯ-ಆಧಾರಿತ ಕಡಲ ಪರಿವರ್ತನೆಗೆ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಕಾರ್ಯಕ್ರಮವು ಹಡಗು ಸಾಗಣೆ, ಬಂದರುಗಳು, ಹಡಗು ನಿರ್ಮಾಣ, ಹಡಗು ಪ್ರವಾಸೋದ್ಯಮ ಮತ್ತು ಕಡಲ ಆರ್ಥಿಕ ಹಣಕಾಸು ಕ್ಷೇತ್ರದಲ್ಲಿ ಪ್ರಮುಖ ಪಾಲುದಾರರನ್ನು ಒಟ್ಟುಗೂಡಿಸುವ ಪ್ರಮುಖ ಜಾಗತಿಕ ವೇದಿಕೆಯಾಗಿದೆ. ಈ ಕಾರ್ಯಕ್ರಮದಲ್ಲಿ ೮೫ ಕ್ಕೂ ಹೆಚ್ಚು ರಾಷ್ಟ್ರಗಳ ಒಂದು ಲಕ್ಷಕ್ಕೂ ಹೆಚ್ಚು ಪ್ರತಿನಿಧಿಗಳು ಮತ್ತು ೩೫೦ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಭಾಷಣಕಾರರು ಭಾಗವಹಿಸಲಿದ್ದಾರೆ.

**************

ನೌಕಾಪಡೆ ದಿನದ ಅಂಗವಾಗಿ ಡಿಸೆಂಬರ್ ೪ ರಂದು ತಿರುವನಂತಪುರದಲ್ಲಿ ಭಾರತೀಯ ನೌಕಾಪಡೆಯ ಕಾರ್ಯಾಚರಣೆ ಪ್ರದರ್ಶನ ನಡೆಯಲಿದೆ. ಪ್ರಮುಖ ನೌಕಾ ಕೇಂದ್ರಗಳನ್ನು ಹೊರತುಪಡಿಸಿ ಇತರ ಸ್ಥಳಗಳಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸುವ ಭಾರತೀಯ ನೌಕಾಪಡೆಯ ಪ್ರಯತ್ನದ ಭಾಗವಾಗಿ ತಿರುವನಂತಪುರಂ ಬಳಿಯ ಸಂಗುಮುಖಂ ಕಡಲತೀರವನ್ನು ಪ್ರದರ್ಶನಕ್ಕಾಗಿ ಆಯ್ಕೆ ಮಾಡಲಾಗಿದೆ. ದಕ್ಷಿಣ ನೌಕಾ ಕಮಾಂಡ್ ಆಯೋಜಿಸಿರುವ ಕಾರ್ಯಕ್ರಮ ಭಾರತೀಯ ನೌಕಾಪಡೆಯ ಬಹುವಲಯ ಕಾರ್ಯಾಚರಣೆಗಳ ವಿವಿಧ ಅಂಶಗಳನ್ನು ವೀಕ್ಷಿಸಲು ಅವಕಾಶವನ್ನು ಒದಗಿಸುತ್ತದೆ ಎಂದು ಕೇರಳದ ಉಸ್ತುವಾರಿ ನೌಕಾ ಅಧಿಕಾರಿ ಕಮೋಡರ್ ವರ್ಗೀಸ್ ಫಿಲಿಪ್ ತಿಳಿಸಿದ್ದಾರೆ. ನೌಕಾ ಅಧಿಕಾರಿಗಳು ಮುಂದಿನ

ತಿಂಗಳು ತಿರುವನಂತಪುರದ ವಿವಿಧ ಶಾಲೆ ಮತ್ತು ಕಾಲೇಜುಗಳಿಗೆ ಜನಸಂಪರ್ಕ ಚಟುವಟಿಕೆಗಳು ಮತ್ತು ಕಾರ್ಯಾಗಾರಗಳಿಗಾಗಿ ಭೇಟಿ ನೀಡಲಿದ್ದಾರೆ.

**************

ಬಂಗಾಳಕೊಲ್ಲಿಯಲ್ಲಿ ಬಲಗೊಳ್ಳುತ್ತಿರುವ 'ಮೊಂಥಾ' ಚಂಡಮಾರುತ ಪ್ರತಿ ಗಂಟೆಗೆ ೧೫ ಕಿ.ಮೀ ವೇಗದಲ್ಲಿ ವಾಯುವ್ಯ ದಿಕ್ಕಿಗೆ ಚಲಿಸಿದ್ದು, ಚೆನ್ನೈನಿಂದ ಪೂರ್ವಕ್ಕೆ ಸುಮಾರು ೪೨೦ ಕಿ.ಮೀ ದೂರದಲ್ಲಿ ಕೇಂದ್ರೀಕೃತವಾಗಿದೆ. ಇದು ಇಂದು ಉತ್ತರ ಮತ್ತು ವಾಯುವ್ಯ ದಿಕ್ಕಿಗೆ ಚಲಿಸುವ ಮತ್ತು ತೀವ್ರ ಚಂಡಮಾರುತವಾಗಿ ತೀವ್ರಗೊಳ್ಳುವ ಸಾಧ್ಯತೆಯಿದೆ. ಭಾರತೀಯ ಹವಾಮಾನ ಇಲಾಖೆ ಮತ್ತು ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ ಜಂಟಿ ಹೇಳಿಕೆ ಬಿಡುಗಡೆ ಮಾಡಿದ್ದು, ಆಂಧ್ರಪ್ರದೇಶ, ಯಾಣಂ, ದಕ್ಷಿಣ ಒಡಿಶಾ ಕರಾವಳಿ ಮತ್ತು ಛತ್ತೀಸ್‌ಗಢಕ್ಕೆ ನಾಳೆಯವರೆಗೆ ರೆಡ್ ಅಲರ್ಟ್ ನೀಡಿದೆ. ರಾಯಲಸೀಮಾ, ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ತೆಲಂಗಾಣದಲ್ಲಿ ಇಂದು ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಚಂಡಮಾರುತವು ಇಂದು ರಾತ್ರಿ ಕಾಕಿನಾಡ ಸುತ್ತಮುತ್ತಲಿನ ಮಚಲಿಪಟ್ಟಣ ಮತ್ತು ಕಳಿಂಗಪಟ್ಟಣ ನಡುವೆ ಆಂಧ್ರಪ್ರದೇಶದ ಕರಾವಳಿಯನ್ನು ಅಪ್ಪಳಿಸುವ ಸಾಧ್ಯತೆಯಿದೆ, ಗಂಟೆಗೆ ೬೦ ರಿಂದ ೧೧೦ ಕಿಲೋಮೀಟರ್ ವೇಗದಲ್ಲಿ ನಿರಂತರ ಗಾಳಿ ಬೀಸುತ್ತಿದ್ದು, ನಾಳೆಯವರೆಗೆ ಮೀನುಗಾರರು ಸಮುದ್ರಕ್ಕಿಳಿಯದಂತೆ ಇಲಾಖೆ ಸೂಚಿಸಿದೆ. ಪ್ರಧಾನಿ ನರೇಂದ್ರ ಮೋದಿ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರೊಂದಿಗೆ ಮಾತನಾಡಿ, ಬೆಂಬಲದ ಭರವಸೆ ನೀಡಿದ್ದಾರೆ. ಮುಖ್ಯಮಂತ್ರಿ ನಾಯ್ಡು ಸನ್ನದ್ಧತೆಯನ್ನು ಪರಿಶೀಲಿಸಿ, ತಗ್ಗು ಪ್ರದೇಶಗಳಿಂದ ಜನರನ್ನು ಪುನರ್ವಸತಿ ಕೇಂದ್ರಗಳಿಗೆ ಸ್ಥಳಾಂತರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮುಖ್ಯಮಂತ್ರಿಗಳು ಪೀಡಿತ ಜಿಲ್ಲೆಗಳಲ್ಲಿ ಶಾಲೆಗಳನ್ನು ಮುಚ್ಚಲು ಆದೇಶಿಸಿದರು. ಜಿಲ್ಲಾಧಿಕಾರಿಗಳು ಮತ್ತು ವಿಶೇಷ ಅಧಿಕಾರಿಗಳು ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ನೋಡಿಕೊಳ್ಳುತ್ತಿದ್ದರೆ, ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳು ಸನ್ನದ್ಧವಾಗಿವೆ. ದಕ್ಷಿಣ ಮಧ್ಯ ರೈಲ್ವೆ, ಪೂರ್ವ ಕರಾವಳಿ ರೈಲ್ವೆ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಇಂದು ತಮ್ಮ ಹಲವು ಸೇವೆಗಳನ್ನು ರದ್ದುಗೊಳಿಸಿವೆ. ನಾಗರಿಕರು ಮನೆಯೊಳಗೆ ಇರಲು ಮತ್ತು ಸುರಕ್ಷತಾ ಸಲಹೆಗಳನ್ನು ಅನುಸರಿಸಲು ಅಧಿಕಾರಿಗಳು ಒತ್ತಾಯಿಸಿದರು. ಒಡಿಶಾದಲ್ಲಿ, ಮುಂಬರುವ

ಚಂಡಮಾರುತದಿಂದ ಉಂಟಾಗುವ ಯಾವುದೇ ಸಂಭಾವ್ಯ ಪರಿಣಾಮವನ್ನು ನಿಭಾಯಿಸಲು ರಾಜ್ಯ ಸರ್ಕಾರವು ಸನ್ನದ್ಧತಾ ಕ್ರಮಗಳನ್ನು ಹೆಚ್ಚಿಸಿದೆ. ಹವಾಮಾನ ಇಲಾಖೆಯು ರಾಜ್ಯದ ಎಂಟು ದಕ್ಷಿಣ ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಿದೆ. ಈ ಜಿಲ್ಲೆಗಳಲ್ಲಿನ ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳನ್ನು ಇಂದಿನಿಂದ ಮೂರು ದಿನಗಳವರೆಗೆ ಮುಚ್ಚಲಾಗಿದೆ.

**************

ಭಾರತದ ವೈಜ್ಞಾನಿಕ ಸಮುದಾಯಕ್ಕೆ ಉತ್ತಮ ಉತ್ತೇಜನವಾಗಿ ಕೇಂದ್ರ ಸರ್ಕಾರ ರಾಷ್ಟ್ರೀಯ ವಿಜ್ಞಾನ ಪುರಸ್ಕಾರ ೨೦೨೫ರ ಪಟ್ಟಿಯನ್ನು ಪ್ರಕಟಿಸಿದೆ. ವಿವಿಧ ಕ್ಷೇತ್ರಗಳಲ್ಲಿ ಅತ್ಯಮೂಲ್ಯ ಕೊಡುಗೆಗಳಿಗಾಗಿ ೨೪ ವಿಶಿಷ್ಠ ವಿಜ್ಞಾನಿಗಳು ಮತ್ತು ಒಂದು ಸಂಶೋಧನಾ ತಂಡವನ್ನು ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ. ಉದ್ಘಾಟನಾ ಆವೃತ್ತಿಯು, ವಿಜ್ಞಾನದ ಮೂಲಕ ವಿಕಸಿತ ಭಾರತ ಎಂಬ ಕೇಂದ್ರ ಸರ್ಕಾರದ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತಾ ಈ ಪ್ರಶಸ್ತಿಗಳು ವೈಜ್ಞಾನಿಕ ಮನೋಭಾವ ಮತ್ತು ನಾವೀನ್ಯತೆ ಚಾಲಿತ ಅಭಿವೃದ್ಧಿ ಹೊಂದಿದ ಭಾರತವನ್ನು ಉತ್ತೇಜಿಸುತ್ತವೆ.  ವಿಜ್ಞಾನ ರತ್ನ, ರಾಷ್ಟ್ರೀಯ ವಿಜ್ಞಾನ ಪುರಸ್ಕಾರಗಳಲ್ಲಿ ಅತ್ಯುತ್ತಮ ಪುರಸ್ಕಾರವಾಗಿದ್ದು, ೨೦೨೪ ರಲ್ಲಿ ಮೊದಲಿಗೆ ಖ್ಯಾತ ಜೀವರಸಾಯನಶಾಸ್ತ್ರಜ್ಞ ಡಾ. ಗೋವಿಂದರಾಜನ್ ಪದ್ಮನಾಭನ್ ಅವರಿಗೆ ನೀಡಲಾಗಿದೆ.  ಉಳಿದಂತೆ ಮೂರು ವಿಭಾಗಗಳಲ್ಲಿ ಪ್ರಶಸ್ತಿ ಪ್ರಕಟಿಸಲಾಗಿದೆ. ಕ್ವಾಂಟಮ್ ವಸ್ತುಗಳಿಂದ ಹಿಡಿದು ಸುಸ್ಥಿರ ಕೃಷಿಯವರೆಗಿನ ಕ್ಷೇತ್ರಗಳಲ್ಲಿ ಕೊಡುಗೆಗಳಿಗಾಗಿ ಎಂಟು ಹಿರಿಯ ಸಂಶೋಧಕರು 'ವಿಜ್ಞಾನ ಶ್ರೀ' ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.. ಆಗಸ್ಟ್ ೨೩ ರಂದು ಆಚರಿಸಲಾಗುವ ರಾಷ್ಟ್ರೀಯ ಬಾಹ್ಯಾಕಾಶ ದಿನದಂದು ವಾರ್ಷಿಕವಾಗಿ ಈ ಪ್ರಶಸ್ತಿಯನ್ನು ನೀಡಲಾಗುತ್ತದೆ. ೪೫ ವರ್ಷಕ್ಕಿಂತ ಕಡಿಮೆ ವಯಸ್ಸಿನ ಹದಿನಾಲ್ಕು ನಾವೀನ್ಯಕಾರರನ್ನು ವಿಜ್ಞಾನ ಯುವ-ಶಾಂತಿ ಸ್ವರೂಪ್ ಭಟ್‌ನಗರ್ ಪ್ರಶಸ್ತಿ ಪುರಸ್ಕೃತರು ಎಂದು ಹೆಸರಿಸಲಾಗಿದೆ, ಏಕೈಕ ವಿಜ್ಞಾನ ತಂಡ ಪ್ರಶಸ್ತಿಯು ಸಿಎಸ್‌ಐಆರ್ ಅರೋಮಾ ಮಿಷನ್‌ಗೆ ಸಂದಿದೆ. ಇದು ಬಹು-ಸಾಂಸ್ಥಿಕ ಒಕ್ಕೂಟವಾಗಿದೆ. ೨೦೨೬ ರ ಫೆಬ್ರವರಿ ೨೮, ರಂದು ರಾಷ್ಟ್ರೀಯ ವಿಜ್ಞಾನ ದಿನದಂದು ರಾ?ಪತಿ ಭವನದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ

**************